**All India Radio: Bangalore**
**National Bulletin In Kannada**
**18.04.2026  1.10 p.m.**

ರಾಷ್ಟ್ರೀಯ ವಾರ್ತೆಗಳು
**18.04.2026  1.10 p.m.**
**<><><><>**

ಮುಖ್ಯಾಂಶಗಳು

1. ಸಂಸತ್ತಿನ ಬಜೆಟ್ ಅಧಿವೇಶನ ಅನಿರ್ದಿಷ್ಟಾವಧಿಗೆ ಮುಂದೂಡಿಕೆ
2. ಲೋಕಸಭೆಯಲ್ಲಿ ೯ ಮಸೂದೆಗಳ ಅಂಗೀಕಾರ; ರಾಜ್ಯಸಭೆಯಲ್ಲಿ ೧೫೭ ಗಂಟೆಗಳ ಕಾಲ ನಡೆದ ಕಲಾಪ
3. ವಿಧಾನಸಭಾ ಚುನಾವಣಾ ಪ್ರಚಾರ ಬಿರುಸು; ತಮಿಳುನಾಡಿನಲ್ಲಿಂದು ಪ್ರಧಾನಿ ನರೇಂದ್ರ ಮೋದಿ, ರಾಹುಲ್ ಗಾಂಧಿ ಮತ ಯಾಚನೆ
4. ಐಪಿಎಲ್ ಕ್ರಿಕೆಟ್; ಬೆಂಗಳೂರಿನಲ್ಲಿಂದು ಮಧ್ಯಾಹ್ನ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

<><><><>

ಸಂಸತ್ತಿನ ಬಜೆಟ್ ಅಧಿವೇಶನವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದೆ. ಈ ವರ್ಷದ ಜನವರಿ ೨೮ರಂದು ಆರಂಭವಾದ ಬಜೆಟ್ ಅಧಿವೇಶನ ಅಂತ್ಯಗೊಂಡಿದೆ. ಲೋಕಸಭೆಯಲ್ಲಿ ಕಲಾಪದ ವರದಿ ಓದಿದ ಸ್ಪೀಕರ್ ಓಂ ಬಿರ್ಲಾ ಅವರು, ಬಜೆಟ್ ಅಧಿವೇಶನದ ವೇಳೆ ಸದನದಲ್ಲಿ ಶೇ ೯೩ ರಷ್ಟು ಕಾರ್ಯಕ್ಷಮತೆಯನ್ನು ದಾಖಲಾಗಿದೆ. ಒಟ್ಟು ೩೧ ಸಭೆಗಳಲ್ಲಿ ೧೨ ಸರ್ಕಾರಿ ಮಸೂದೆಗಳನ್ನು ಮಂಡಿಸಿದ್ದು, ೯ ಮಸೂದೆಗಳನ್ನು ಅಂಗೀಕರಿಸಲಾಗಿದೆ ಎಂದು ಅವರು ತಿಳಿಸಿದರು. ಇದರಲ್ಲಿ ಹಣಕಾಸು ಮಸೂದೆ, ದಿವಾಳಿತನ ಮತ್ತು ದಿವಾಳಿ ಸಂಹಿತೆ ತಿದ್ದುಪಡಿ ಮಸೂದೆ ೨೦೨೫, ಆಂಧ್ರ ಪ್ರದೇಶ ಪುನರ್‌ವ್ಯವಸ್ಥೆ ತಿದ್ದುಪಡಿ ಮಸೂದೆ, ಜನ ವಿಶ್ವಾಸ ವಿಧಾನಗಳ ತಿದ್ದುಪಡಿ ಮಸೂದೆ ಹಾಗೂ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಾಮಾನ್ಯ ಆಡಳಿತ ಮಸೂದೆ ೨೦೨೬ ಸೇರಿವೆ ಎಂದರು. ರಾಜ್ಯಸಭೆಯಲ್ಲಿ ಸಭಾಪತಿ ಸಿ.ಪಿ. ರಾಧಾಕೃಷ್ಣನ್ ಸದನ ಕಲಾಪದ ವರದಿಯನ್ನು ಓದಿದರು. ಸದನವು ಒಟ್ಟು ೧೫೭ ಗಂಟೆಗೂ ಹೆಚ್ಚು ಕಾಲ ಕಾರ್ಯನಿರ್ವಹಿಸಿದ್ದು, ಈ ಅಧಿವೇಶನದ ಉತ್ಪಾದಕತೆ ಶೇ ೧೧೦ ರಷ್ಟಿದೆ. ಸಂಸತ್ತಿನ ಮೂರು ಅಧಿವೇಶನಗಳಲ್ಲಿ ಬಜೆಟ್ ಅಧಿವೇಶನವು ಅತ್ಯಂತ ಮಹತ್ವದ್ದಾಗಿದೆ. ಏಕೆಂದರೆ ಇದು ಅವುಗಳಲ್ಲಿ ದೀರ್ಘವಾದದ್ದು ಮಾತ್ರವಲ್ಲ, ದೇಶದ ಅಭಿವೃದ್ಧಿ ದಿಕ್ಕನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದ ಅವರು ಸದನದ ಚರ್ಚೆಗಳನ್ನು ಶ್ರೀಮಂತಗೊಳಿಸಿದ ಸದಸ್ಯರ ಅಮೂಲ್ಯ ಅಭಿಪ್ರಾಯಗಳನ್ನು ಪ್ರಶಂಸಿಸಿದರು. ಈ ಅಧಿವೇಶನದಲ್ಲಿ ನಾಮನಿರ್ದೇಶಿತ ಸದಸ್ಯ ಹರಿವಂಶ್ ಅವರನ್ನು ಮೂರನೇ ಬಾರಿಗೆ ರಾಜ್ಯಸಭೆಯ ಉಪಾಧ್ಯಕ್ಷರಾಗಿ ಮರು ಆಯ್ಕೆ ಮಾಡಲಾಗಿದೆ ಎಂದು ಸಭಾಪತಿ ಸಿ ಪಿ ರಾಧಾಕೃಷ್ಣನ್ ತಿಳಿಸಿದರು. ಈ ಅಧಿವೇಶನದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷ ಹಾಗೂ ಭಾರತದ ಮೇಲೆ ಬೀರುವ ಸವಾಲುಗಳು, ವಿಶೇಷವಾಗಿ ಇಂಧನ ಅಗತ್ಯತೆಗಳನ್ನು ಪೂರೈಸುವ ವಿಚಾರವಾಗಿ ಸಮಗ್ರ ಹೇಳಿಕೆ ನೀಡಿದರು. ಅವರು ಪರಿಸ್ಥಿತಿಯನ್ನು ಸಮರ್ಪಕ ದೃಷ್ಟಿಕೋನದಿಂದ ವಿವರಿಸಿ, ಅದನ್ನು ಎದುರಿಸಲು ದೇಶದ ಸಮೂಹಿಕ ಸಂಕಲ್ಪದ ಅಗತ್ಯವನ್ನು ಒತ್ತಿಹೇಳಿದರು. ಇದೇ ವೇಳೆ, ಭಾರತ-

ಅಮೆರಿಕಾ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಕುರಿತು ವಾಣಿಜ್ಯ ಮತ್ತು ಕೈಗಾರಿಕಾ ಸಚಿವರು ಹಾಗೂ ಪಶ್ಚಿಮ ಏಷ್ಯಾ ಪರಿಸ್ಥಿತಿ ಕುರಿತು ವಿದೇಶಾಂಗ ಸಚಿವರು ನೀಡಿದ ಸ್ವಯಂಪ್ರೇರಿತ ಹೇಳಿಕೆಗಳನ್ನು ಸದನ ಗಮನಕ್ಕೆ ತೆಗೆದುಕೊಂಡಿತು ಎಂದರು.

<><><><>

ತಮಿಳುನಾಡು ಮತ್ತು ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆ ಮತ್ತು ಉಪಚುನಾವಣೆಗಳ ಮುನ್ನ, ಚುನಾವಣಾ ಆಯೋಗವು ೮೬೫ ಕೋಟಿಗೂ ಅಧಿಕ ಮೌಲ್ಯದ ನಗ, ನಗದು ಮತದಾರರಿಗೆ ಹಂಚಲು ಉದ್ದೇಶಿಸಿದ್ದ ವಸ್ತುಗಳನ್ನು ವಶಪಡಿಸಿಕೊಂಡಿರುವುದಾಗಿ ತಿಳಿಸಿದೆ. ಪಶ್ಚಿಮ ಬಂಗಾಳದಲ್ಲಿ ೪೨೭ ಕೋಟಿ ರೂಪಾಯಿ ಮತ್ತು ಮಿಳುನಾಡಿನಲ್ಲಿ ಅತ್ಯಧಿಕ ೪೩೮ ಕೋಟಿ ರೂಪಾಯಿ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಪಶ್ಚಿಮ ಬಂಗಾಳದಲ್ಲಿ ಐದು ಬೂತ್ ಮಟ್ಟದ ಅಧಿಕಾರಿಗಳನ್ನು ಚುನಾವಣಾ ಆಯೋಗ ಅಮಾನತು ಮಾಡಿದೆ. ಇಲಾಖಾ ತನಿಖೆಯ ಜೊತೆಗೆ ಆರೋಪಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲು ಸೂಚನೆ ನೀಡಲಾಗಿದೆ. ಆಯೋಗದ ಮೂಲಗಳ ಪ್ರಕಾರ, ಈ ಅಧಿಕಾರಿಗಳು ಒಂದು ರಾಜಕೀಯ ಪಕ್ಷಕ್ಕಾಗಿ ನೇರವಾಗಿ ಕೆಲಸ ಮಾಡುತ್ತಿರುವ ಆರೋಪ ಎದುರಿಸುತ್ತಿದ್ದಾರೆ. ಚುನಾವಣಾ ದಿನಾಂಕಗಳು ಸಮೀಪಿಸುತ್ತಿರುವಂತೆ, ಪಶ್ಚಿಮ ಬಂಗಾಳ ಮತ್ತು ತಮಿಳುನಾಡಿನಲ್ಲಿ ಪ್ರಮುಖ ರಾಜಕೀಯ ಪಕ್ಷಗಳು ತಮ್ಮ ಪ್ರಚಾರವನ್ನು ತೀವ್ರಗೊಳಿಸಿವೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ನಾಯಕ ಮತ್ತು ಅಸ್ಸಾಂ ಮುಖ್ಯಮಂತ್ರಿ ಹಿಮಂತ್ ಬಿಸ್ವ ಸರ್ಮ ಅವರು ಇಂದು ಉತ್ತರ ಬಂಗಾಳಕ್ಕೆ ಭೇಟಿ ನೀಡುತ್ತಿದ್ದಾರೆ. ತೃಣಮೂಲ ಕಾಂಗ್ರೆಸ್ ಪರವಾಗಿ, ಝಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರು ಬ್ಯಾಂಕುರಾ, ಪುರೂಲಿಯಾ, ಜಾರ್ಗ್ರಾಮ್ ಮತ್ತು ಪಶ್ಚಿಮ ಮೇದಿನೀಪುರದ ಆದಿವಾಸಿ ಪ್ರಾಬಲ್ಯ ಪ್ರದೇಶಗಳಲ್ಲಿ ಪ್ರಚಾರ ನಡೆಸಲಿದ್ದಾರೆ. ಮುಖ್ಯಮಂತ್ರಿ ಮತ್ತು ಪಕ್ಷದ ನಾಯಕಿ ಮಮತಾ ಬ್ಯಾನರ್ಜಿ ಅವರು ಕೂಡ ಹಲವಾರು ಸಾರ್ವಜನಿಕ ಸಭೆಗಳನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ತಮಿಳುನಾಡಿನಲ್ಲಿ, ಪ್ರಧಾನಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ನರೇಂದ್ರ ಮೋದಿ ಅವರು ಮತಯಾಚಿಸಲಿದ್ದಾರೆ. ಕೋಯಂಬತ್ತೂರಿನಲ್ಲಿ ಅವರು ಎನ್.ಡಿ.ಎ ಅಭ್ಯರ್ಥಿಗಳ ಪರ ಪ್ರಚಾರ ಮಾಡಲಿದ್ದಾರೆ. ವಿಮಾನ ನಿಲ್ದಾಣದಿಂದ ಕೊಡಿಸ್ಸಿಯಾ ವರೆಗೆ ಪ್ರಧಾನಿ ಅವರು ರೋಡ್ ಶೋ ನಡೆಸಲಿದ್ದಾರೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ತಮಿಳುನಾಡಿನ ತಿರುಚಿರಾಪಳ್ಳಿಯ ತುರೈಯೂರಿನಲ್ಲಿ ಅಭ್ಯರ್ಥಿಗಳ ಪರ ಪ್ರಚಾರ ನಡೆಸಲಿದ್ದಾರೆ.

<><><><>

ವಿಶ್ವ ಪಾರಂಪರಿಕ ದಿನವನ್ನು ಇಂದು ವಿಶ್ವದಾದ್ಯಂತ ಆಚರಿಸಲಾಗುತ್ತಿದೆ. ಸಾಂಸ್ಕೃತಿಕ ಮತ್ತು ನೈಸರ್ಗಿಕ ಪಾರಂಪರ್ಯದ ವೈವಿಧ್ಯತೆ ಮತ್ತು ಮಹತ್ವದ ಬಗ್ಗೆ ಎಲ್ಲೆಡೆ ಜಾಗೃತಿ ಮೂಡಿಸಲಾಗುತ್ತಿದೆ. ಐತಿಹಾಸಿಕ ತಾಣಗಳ ಸಂರಕ್ಷಣೆಯನ್ನು ಉತ್ತೇಜಿಸಲು ಈ ದಿನವನ್ನು ಆಚರಿಸಲಾಗುತ್ತದೆ. “ಸಂಘರ್ಷ ಮತ್ತು ವಿಪತ್ತುಗಳ ಸಂದರ್ಭದಲ್ಲಿ ಜೀವಂತ ಪಾರಂಪರಿಕ ಮಹತ್ವದ ಬಗ್ಗೆ ತುರ್ತು ಪ್ರತಿಕ್ರಿಯೆ” ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ. ಸಂಕಷ್ಟಗಳ ಸಮಯದಲ್ಲಿ ಸಾಂಸ್ಕೃತಿಕ ಪಾರಂಪರಿಕ ತಾಣಗಳು ಮತ್ತು ಪರಂಪರೆಗಳನ್ನು ರಕ್ಷಿಸುವುದು ಹಾಗೂ ಪ್ರತಿರೋಧ ಸಾಮರ್ಥ್ಯವನ್ನು ಹೆಚ್ಚಿಸುವುದರ ಮೇಲೆ ಗಮನ ಹರಿಸಲಾಗಿದೆ. ಈ ದಿನದ ಅಂಗವಾಗಿ ಸ್ಮಾರಕಗಳಿಗೆ ಭೇಟಿ, ಸಮ್ಮೇಳನಗಳು, ಶೈಕ್ಷಣಿಕ ಕಾರ್ಯಕ್ರಮಗಳು ಮತ್ತು ಛಾಯಾಚಿತ್ರ ಪ್ರದರ್ಶನಗಳು ನಡೆಯುತ್ತವೆ. ಈ

ಸಂದರ್ಭದಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ದೇಶದ ನಾಗರಿಕರಿಗೆ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್ ನಲ್ಲಿ ಅವರು, ಭಾರತದ ಭೂಮಿ ಸದಾ ಐತಿಹಾಸಿಕ ಸಂಪತ್ತುಗಳು, ವಾಸ್ತುಶಿಲ್ಪ ಅದ್ಭುತಗಳು ಮತ್ತು ಸಾಂಸ್ಕೃತಿಕ ವೈವಿಧ್ಯತೆಯಿಂದ ಸಮೃದ್ಧವಾಗಿದ್ದು, ಅದರ ವೈಶಿಷ್ಟ್ಯದ ಪರಂಪರೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ವಿಶ್ವ ಪಾರಂಪರಿಕ ದಿನದ ಅಂಗವಾಗಿ, ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ನಾಗರಿಕರು ಐತಿಹಾಸಿಕ ತಾಣಗಳಿಗೆ ಭೇಟಿ ನೀಡುವಾಗ ಅವುಗಳನ್ನು ಸ್ವಚ್ಛವಾಗಿ ಮತ್ತು ಸುರಕ್ಷಿತವಾಗಿಡುವ ಪ್ರತಿಜ್ಞೆ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ. ದೇಶದ ಐತಿಹಾಸಿಕ ತಾಣಗಳನ್ನು ಗೌರವಿಸುವಂತೆಯೂ ಅವರು ನಾಗರಿಕರನ್ನು ಒತ್ತಾಯಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ದೇವಾಲಯಗಳ ಗೋಡೆಗಳು, ಪ್ರಾಚೀನ ಕೋಟೆಗಳ ಕೆತ್ತನೆಗಳು ಮತ್ತು ತಲೆಮಾರುಗಳ ಜಾನಪದ ಗೀತೆಗಳು ನಾಗರಿಕರ ನಿಜವಾದ ಗುರುತುಗಳಾಗಿವೆ ಎಂದು ಹೇಳಿದ್ದಾರೆ.

<><><>

ರಾಯ್‌ಬರೇಲಿ ಕ್ಷೇತ್ರದ ಕಾಂಗ್ರೆಸ್ ಸಂಸದ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ದ್ವಿ ಪೌರತ್ವ ಪ್ರಕರಣದಲ್ಲಿ ಎಫ್.ಐ.ಆರ್ ದಾಖಲಿಸುವಂತೆ ಉತ್ತರ ಪ್ರದೇಶ ಅಲಹಾಬಾದ್ ಹೈಕೋರ್ಟ್‌ನ ಲಖ್ನೋ ಪೀಠ ಆದೇಶ ನೀಡಿದೆ. ರಾಹುಲ್ ಗಾಂಧಿ ವಿರುದ್ಧದ ಆರೋಪಗಳನ್ನು ಪರಿಶೀಲಿಸುವ ಅಗತ್ಯವಿದೆ. ಉತ್ತರ ಪ್ರದೇಶ ಸರ್ಕಾರ ಈ ಕುರಿತು ಸ್ವತಃ ತನಿಖೆ ನಡೆಸಲಿ ಅಥವಾ ವಿಷಯವನ್ನು ಕೇಂದ್ರ ಸಂಸ್ಥೆಗೆ ಹಸ್ತಾಂತರಿಸಲಿ ಎಂದು ನ್ಯಾಯಮೂರ್ತಿ ಸುಭಾಷ್ ವಿದ್ಯಾರ್ಥಿ ಅವರು ಹೇಳಿದ್ದಾರೆ. ಬಿಜೆಪಿಯ ಕಾರ್ಯಕರ್ತ ಎಸ್. ವಿಘ್ನೇಶ್ ಶಿಶಿರ್ ದ್ವಿ ಪೌರತ್ವ ಪ್ರಶ್ನಿಸಿ ಅರ್ಜಿ ಸಲ್ಲಿಸಿದ್ದರು.

<><><>

ಶಾಸನಸಭೆಗಳಲ್ಲಿ ಮಹಿಳೆಯರಿಗೆ ಒಂದು ಮೂರನೇ ಭಾಗ ಮೀಸಲಾತಿಯನ್ನು ಜಾರಿಗೆ ತರಲು ಉದ್ದೇಶಿಸಿದ್ದ ಸಂವಿಧಾನದ ೧೩೧ ತಿದ್ದುಪಡಿ ಮಸೂದೆಗೆ ಲೋಕಸಭೆಯಲ್ಲಿ ಅನುಮೋದನೆ ಸಿಗಲಿಲ್ಲ. ಪ್ರತಿಪಕ್ಷಗಳ ಧೋರಣೆಯನ್ನು ವಿರೋಧಿಸಿ ಬಿಜೆಪಿ ಮಹಿಳಾ ಸಂಸದರು ಸಂಸತ್ ಭವನ ಸಮುಚ್ಚಯದಲ್ಲಿ ಪ್ರತಿಭಟನೆ ನಡೆಸಿದರು. ೨೦೨೯ರಿಂದ ವಿಧಾನಮಂಡಲಗಳಲ್ಲಿ ಮಹಿಳಾ ಮೀಸಲಾತಿ ಜಾರಿಗೆ ತರಲು ಹಾಗೂ ಲೋಕಸಭೆಯ ಸದಸ್ಯರ ಸಂಖ್ಯೆಯನ್ನು ಹೆಚ್ಚಿಸಲು ಉದ್ದೇಶಿಸಿದ್ದ ಸಂವಿಧಾನ ತಿದ್ದುಪಡಿ ಮಸೂದೆ ಸೋಲಿನ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮತ್ತು ಅದರ ಮೈತ್ರಿ ಪಕ್ಷಗಳ ವಿರುದ್ಧ ಪ್ರತಿಭಟನೆ ನಡೆಯಿತು.

<><><>

ತನ್ನ ಬಂದರುಗಳನ್ನು ಗುರಿಯಾಗಿಸಿಕೊಂಡು ಅಮೆರಿಕ ಮುಂದುವರಿಸುತ್ತಿರುವ ಸಮುದ್ರ ನಿರ್ಬಂಧವನ್ನು ನಿಲ್ಲಿಸದಿದ್ದರೆ ಪ್ರತಿಕ್ರಿಯಾತ್ಮಕ ಕ್ರಮಗಳನ್ನು ಕೈಗೊಳ್ಳುವುದಾಗಿ ಇರಾನ್‌ಎಚ್ಚರಿಸಿದೆ. ಇದೇ ವೇಳೆ, ಹೊರ್ಮುಜ್ ಜಲಸಂಧಿ ಮೂಲಕ ಸಾಗಾಟಕ್ಕೆ ಸಂಬಂಧಿಸಿದ ಷರತ್ತುಗಳನ್ನು ಕೂಡ ಅದು ವಿವರಿಸಿದೆ. ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮಾಯಿಲ್ ಬಘಾಯೆ ಅವರು, ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಅವರ ಹಿಂದಿನ ಹೇಳಿಕೆಗೆ ಸ್ಪಷ್ಟನೆ ನೀಡಿದರು. ಸುದ್ದಿವಾಹಿನಿಯ ಪ್ರಕಾರ, ಇರಾನ್ ನಿಗದಿಪಡಿಸಿದ ಮಾರ್ಗದ ಮೂಲಕ ಮಾತ್ರ ಹೋರ್ಮುಜ್ ಜಲಸಂಧಿಯಲ್ಲಿ ಸಾಗಾಟಕ್ಕೆ ಅನುಮತಿ ನೀಡಲಾಗುತ್ತದೆ ಎಂದು ಬಘಾಯೆ ತಿಳಿಸಿದ್ದಾರೆ.

<><><>

ಇರಾನ್‌ನ ಬಂದರುಗಳ ಮೇಲಿನ ಅಮೆರಿಕದ ನೌಕಾ ನಿರ್ಬಂಧವು ತೆಹ್ರಾನ್ ನೊಂದಿಗೆ ಸಮಗ್ರ ಶಾಂತಿ ಒಪ್ಪಂದ ಅಂತಿಮಗೊಳ್ಳುವವರೆಗೆ ಮುಂದುವರಿಯುತ್ತದೆ ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಇರಾನ್ ಹೋರ್ಮುಜ್ ಜಲಸಂಧಿಗೆ ಪ್ರವೇಶವನ್ನು ಪುನಃಸ್ಥಾಪಿಸಿದರೂ ಈ ನಿರ್ಬಂಧ ಮುಂದುವರಿಯಲಿದೆ ಎಂದು ಅವರು ತಿಳಿಸಿದ್ದಾರೆ. ತಮ್ಮ 'ಟ್ರೂತ್ ಸೋಶಿಯಲ್' ಜಾಲತಾಣದ ಮೂಲಕ ಅಮೆರಿಕದ ನಿಲುವನ್ನು ಸ್ಪಷ್ಟಪಡಿಸಿದ ಟ್ರಂಪ್, ಇರಾನ್ ಗೆ ಸಂಬಂಧಿಸಿದಂತೆ ನೌಕಾ ನಿರ್ಬಂಧ ಸಂಪೂರ್ಣವಾಗಿ ಜಾರಿಯಲ್ಲೇ ಇರುತ್ತದೆ ಮತ್ತು ಇರಾನ್ನ್ ನೊಂದಿಗೆ ನಮ್ಮ ವ್ಯವಹಾರ ಪ್ರತಿಶತಃ ೧೦೦ ರಷ್ಟು ಪೂರ್ಣಗೊಳ್ಳುವವರೆಗೆ ಇದು ಮುಂದುವರಿಯುತ್ತದೆ. ಈ ಪ್ರಕ್ರಿಯೆ ಬಹಳ ಶೀಘ್ರದಲ್ಲಿ ಪೂರ್ಣಗೊಳ್ಳಲಿದೆ ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩:೩೦ಕ್ಕೆ ಆರಂಭವಾಗಲಿದೆ. ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುವ ಮತ್ತೊಂದು ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ.

<><><><>

ಸಂವಿಧಾನ ತಿದ್ದುಪಡಿ ಮಸೂದೆಯ ಅಂಗೀಕಾರವನ್ನು ತಡೆಯುವ ಮೂಲಕ 'ದೇಶದ ಅರ್ಧ ಜನಸಂಖ್ಯೆ'ಗೆ ವಿರೋಧ ಪಕ್ಷಗಳ ಮೈತ್ರಿ ಕೂಟ ಭಾರೀ ದ್ರೋಹ ಮಾಡಿದೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಹೇಳಿದ್ದಾರೆ. ಈ ಮಸೂದೆ ಅಂಗೀಕಾರವಾದರೆ ನಾರಿ ಶಕ್ತಿ ವಂದನ ಅಧಿನಿಯಮವನ್ನು ಪರಿಣಾಮಕಾರಿಯಾಗಿ ಜಾರಿಗೆ ತರಬಹುದಾಗಿತ್ತು ಎಂದು ಅವರು ತಿಳಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>